ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಬಡ್ತಿ

1572 (1793) ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಪ್ರೌಢ ಶಾಲಾ ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಸರ್ಕಾರದ ನಿಲುವೇನು?

ಆ) ಅರ್ಹ ಶಿಕ್ಷಕರ ಸೇವಾ ಪುಸ್ತಕ ಪರಿಶೀಲನಾ ಕಾರ್ಯ ಹಾಗೂ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಸಿದ್ದಪಡಿಸಿದ್ದು ಈ ಬಗ್ಗೆ ಬಡ್ತಿ ಆದೇಶ ನೀಡಲು ಆಗಿರುವ ವಿಳಂಬಕ್ಕೆ ಕಾರಣಗಳೇನು;

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಪ್ರತಿ ವರ್ಷ ಜನವರಿ 1ರಲ್ಲಿದ್ದಂತೆ ತರಬೇತಿ ಹೊಂದಿದ ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಜೇಷ್ಠತಾ ಪಟ್ಟಿ ತಯಾರಿಸಿ ಪ್ರಕಟಿಸಿ ಅದರ ಅನ್ವಯ ಖಾಲಿ ಹುದ್ದೆಗಳಿಗೆ ಅನುಗುಣವಾಗಿ ಬಡ್ತಿ ನೀಡಲಾಗುತ್ತಿದೆ.

ಆ) ಸರ್ಕಾರದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಹಾಗೂ ಉಪನಿರ್ದೇಶಕರುಗಳಿಂದ ಅವಶ್ಯಕ ಮಾಹಿತಿ ಬಾರದೆ ಇರುವುದು ವಿಳಂಬಕ್ಕೆ ಕಾರಣವಾಗಿದೆ. ಇಂತಹ ಪ್ರಸಂಗದಲ್ಲಿ ವಿಳಂಬ ತಪ್ಪಿಸಲು ಕಛೇರಿಯ ಸಿಬ್ಬಂದಿಯನ್ನು ಆಯಾ ಜಿಲ್ಲಾ ತಾಲ್ಲೂಕು ಕಛೇರಿಗೆ ನಿಯೋಜಿಸಿ ಮಾಹಿತಿ ಸಂಗ್ರಹಿಸಿ ವಿಳಂಬ ತಪ್ಪಿಸಲು ಪ್ರಯತ್ನಿಸಲಾಗುತ್ತಿದೆ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ನಿರುದ್ಯೋಗಿ ಬಿ.ಎಡ್. ಪದವೀಧರರ ನೇಮಕಾತಿ

1573 (1794) ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 10 ವರ್ಷಗಳಿಂದ ಬಿ.ಎಡ್. ಪದವೀಧರರಾಗಿದ್ದು ಪ್ರೌಢಶಾಲಾ ಶಿಕ್ಷಕರ ನೇಮಕಾತಿ ವೇಳೆ ಆಯ್ಕೆಯಾಗಿರದ ನಿರುದ್ಯೋಗಿ ಬಿ.ಎಡ್. ಪದವೀಧರರುಗಳನ್ನು ನೇಮಕಾತಿ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ಹಾಗಿದ್ದಲ್ಲಿ, ಅಂಥವರನ್ನು ನೇಮಕಾತಿ ಮಾಡಲು ಸರ್ಕಾರ ಅನುಸರಿಸಲಾಗುವ ನೀತಿ ನಿಯಮಗಳೇನು?

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು) :

ಅ) ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಳೆದ 10 ವರ್ಷಗಳಿಂದ ಖಾಲಿ ಇದ್ದ 11186 ಹುದ್ದೆಗಳಿಗೆ ಹಂತ ಹಂತವಾಗಿ ಕಾಲ ಕಾಲಕ್ಕೆ ನೇಮಕಾತಿ ಮೂಲಕ ಬಿ.ಎಡ್. ಹಾಗೂ ಬಿ.ಪಿ.ಎಡ್. ಪದವೀಧರರನ್ನು ನೇವಕಾತಿ ಮಾಡಲಾಗಿದೆ. ಇದಲ್ಲದೆ, ಪ್ರೌಢಶಾಲಾ ಮುಖ್ಯೋಪಾಧ್ಯಾಯರನ್ನಾಗಿ

ನೇರವಾಗಿ ಕರ್ನಾಟಕ ಲೋಕ ಸೇವಾ ಆಯೋಗದಿಂದ 1668 ನೇಮಕ ಮಾಡಲಾಗಿದೆ. ಎಲ್ಲಾ ನಿರುದ್ಯೋಗಿ ಬಿ.ಎಡ್./ಬಿ.ಪಿ.ಎಡ್. ಪದವೀಧರರನ್ನು ನೇಮಕ ಮಾಡಲು ಸರ್ಕಾರಕ್ಕೆ ಸಾಧ್ಯವಾಗುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಉಡುಪಿ ಸರ್ಕಾರಿ ಹೆರಿಗೆ ಆಸ್ಪತ್ರೆಗೆ ಶ್ರೀ ಹಾಜಿ ಅಬ್ದುಲ್ಲಾ ಸಾಹೇಬರ ಹೆಸರು ನಾಮಕರಣ

1575 (1796) ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿಯ ಸರ್ಕಾರಿ ಹೆಂಗಸರ ಮತ್ತು ಮಕ್ಕಳ ಆಸ್ಪತ್ರೆಯ ನಿವೇಶನವನ್ನು ಸರ್ಕಾರಕ್ಕೆ ಹಾಜಿ ಅಬ್ದುಲ್ಲಾ ಸಾಹೇಬರು ಉಚಿತವಾಗಿ ನೀಡಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಆ ಆಸ್ಪತ್ರೆಗೆ ಹಾಜಿ ಅಬ್ದುಲ್ಲಾ ಸಾಹೇಬ್ ಸ್ಮಾರಕ ಸರ್ಕಾರಿ ಹೆಂಗಸರ ಮತ್ತು ಮಕ್ಕಳ ಆಸ್ಪತ್ರೆ ಎಂದು ನಾಮಕರಣ ಮಾಡಲಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ, ನಾಮಕರಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಎಂದು ಕ್ರಮ ತೆಗೆದುಕೊಳ್ಳುವುದು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು

ಆ) ಇಲ್ಲ

ಇ) ಇಲ್ಲ

ಈ) ಈ ಬಗ್ಗೆ ಸಂಬಂಧಿಸಿದ ಸಂಸ್ಥೆಯಿಂದ ಕೋರಿಕೆ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು

ಸಿಂದಗಿ ಪಟ್ಟಣದಲ್ಲಿ ಆಸ್ಪತ್ರೆ ಕಟ್ಟಡ ನವೀಕರಣ

Building Construction

1576 (1983) Sri. Sunigar Sharanappa Thippanna (Sindhgi) : Will the Ministers for Health and Family Welfare be pleased to state?

a) Whether sanction has been given for renovation of Hospital of Sindhgi and for construction of Generator Room in its premises?

b) If so, its estimated cost and the expenditure incurred?

c) Whether the work is completed? If not, when will it be completed?